ಈ ಸಂಜೆ

# ಮಕ್ಕಳ ವ್ಯಕ್ತಿತ್ವ ವಿಕಸನಕ್ಕೆ ಸಾಹಿತ್ಯ ಪ್ರೇರಕ: ಬಸು

**ಧಾರವಾಡ, ಜೂ.30:** ಪ್ರಸ್ತುತ ಸಮಾಜದಲ್ಲಿ ಮಕ್ಕಳ ವ್ಯಕ್ತಿತ್ವ ವಿಕಸನಕ್ಕಾಗಿ ನೇರವಾಗಿ ಬುದ್ಧಿಮಾತು ಹೇಳುವ ಬದಲು ಸಾಹಿತ್ಯದ ಮೂಲಕ ಮಾರ್ಗದರ್ಶನ ಮಾಡುವುದರಿಂದ ಹೇಳಬೇಕಾದ ವಿಚಾರವು ಮಕ್ಕಳ ಮನಸ್ಸಿನಲ್ಲಿ ದೀರ್ಘಕಾಲ ಉಳಿಯುತ್ತದೆ. ಸಾಹಿತ್ಯದ ಸ್ವಾರಸ್ಯಕರ ಸಂಗತಿಗಳು, ಮನರಂಜನೆಯ ಅಂಶಗಳು, ಭಾಷೆಯ ಲಯ, ಸೌಂದರ್ಯ, ಆಕರ್ಷಣೆಗಳ ಮುಖಾಂತರ ಸಂದೇಶಗಳನ್ನು ಕಳಿಸಿದರೆ, ಬೆಳೆಯುತ್ತಿರುವ ಮಕ್ಕಳಲ್ಲಿ ಸಾಹಿತ್ಯದ ಆಸಕ್ತಿ ಹೆಚ್ಚಾಗುತ್ತದೆ ಎಂದು ಕಥೆಗಾರ, ನಿವೃತ್ತ ಆಕಾಶವಾಣಿ ಕಾರ್ಯಕ್ರಮ ಅಧಿಕಾರಿ ಡಾ. ಬಸು ಬೇವಿನಗಿಡದ ಹೇಳಿದರು.

ನಗರದ ಮಾಳಮಡ್ಡಿಯ ಕೆ.ಇ.ಬೋರ್ಡ ಸಂಸ್ಥೆಯ ಸಭಾಂಗಣದಲ್ಲಿ ಕೇಂದ್ರ ಸಾಹಿತ್ಯ ಅಕಾಡೆಮಿ ಹಾಗೂ ಕೆ.ಇ.ಬೋರ್ಡ ಸಂಸ್ಥೆಯ ಸಹಯೋಗದಲ್ಲಿ ಏರ್ಪಡಿಸಿದ್ದ ಬಾಲ ಸಾಹಿತಿ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿದ ಬೇವಿನಗಿಡದ ಅವರು ಮಕ್ಕಳು ಉತ್ತಮ ಸಾಹಿತ್ಯ ಕೃತಿಗಳನ್ನು ಓದುತ್ತ ಸಂಸ್ಕೃತಿಯ ಅರಿವನ್ನು ಹೆಚ್ಚಿಸಿಕೊಳ್ಳಬೇಕಾಗುತ್ತದೆ. ಸಮಕಾಲೀನ ಬದುಕಿನಲ್ಲಿ ಇರುವಂತ ಒಳ್ಳೆಯ ಅಂಶಗಳನ್ನು ಗಣನೆಗೆ ತೆಗೆದುಕೊಂಡು, ಮಕ್ಕಳ ಸಣ್ಣಪುಟ್ಟ ಸಾಧನೆಗಳನ್ನೂ ಕೂಡ ಪ್ರೋತ್ಸಾಹಿಸುವರ ಮುಖಾಂತರ ಅವರ ಆತ್ಮವಿಶ್ವಾಸವನ್ನು ಹೆಚ್ಚಿಸಬಹುದಾಗಿದೆ ಎಂದು ತಿಳಿಸಿದರು.

ಸುನಂದಾ ಕಡಮೆ ಮಕ್ಕಳ ಸಾಹಿತ್ಯದಲ್ಲಿ ಅಡಕವಾಗಿರುವ ಶೈಕ್ಷಣಿಕ ವಿಚಾರಗಳ ಕುರಿತಾಗಿ ಮಾತನಾಡುತ್ತ ಮಕ್ಕಳು ತಮ್ಮ ಹಕ್ಕುಗಳು, ಸುರಕ್ಷತೆ, ಸವಲತ್ತುಗಳು,



ಕಾನೂನುಗಳ ಬಗ್ಗೆ ತಿಳಿದುಕೊಳ್ಳುವುದು ಅಗತ್ಯವಿದೆ ಎಂದರು. ಶಿಕ್ಷಕರು ಸಾಹಿತ್ಯದ ಕೃತಿಗಳನ್ನು ಓದಲು ಮಕ್ಕಳಲ್ಲಿ ಪ್ರೇರಣೆ ತುಂಬಿ ಭವಿಷ್ಯದ ಬಗೆಗೆ ಮಕ್ಕಳು ಸಕಾರಾತ್ಮಕವಾಗಿ ಯೋಚಿಸುವಂತೆ ಮಾಡಬೇಕೆಂದರು. ಯಾವುದೇ ಸಾಹಿತ್ಯವು ಮನುಷ್ಯನ ತಿಳುವಳಿಕೆಯನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಿರುವುದರಿಂದ ಶೈಕ್ಷಣಿಕವಾಗಿ ಕಲಿಯುವ ಅಂಶಗಳು ಇದ್ದೇ ಇರುತ್ತವೆ ಆದ್ದರಿಂದ ಬಾಲ್ಯದಿಂದಲೇ ಸಾಹಿತ್ಯ ಕೃತಿಗಳ ಬಗ್ಗೆ ಮಕ್ಕಳಲ್ಲಿ ಒಲವು ಮೂಡಿಸುವುದು ಅವಶ್ಯಕವಾಗಿದೆ ಎಂದರು.

ಕೆ.ಇ.ಬೋರ್ಡ ಸಂಸ್ಥೆಯ ಕಾರ್ಯದರ್ಶಿಗಳಾದ ಡಿ.ಎಸ್. ರಾಜಪುರೋಹಿತ ಮಕ್ಕಳ ಮೇಲೆ ಕೇವಲ ಅಂಕಗಳನ್ನು ಸಂಪಾದಿಸುವ ಒತ್ತಡವನ್ನು ಹೇರದೇ, ವಿದ್ಯುನ್ಮಾನ ಯಂತ್ರಗಳ ಗುಲಾಮರನ್ನಾಗಿ ಮಾಡದೇ ಸುತ್ತಲ ಪರಿಸರದ ಕುರಿತಾಗಿ ಆಸಕ್ತಿಯನ್ನು ಮೂಡಿಸುವ ಕೆಲಸವಾಗಬೇಕಾಗಿದೆ ಎಂದು ಹೇಳಿದರು. ಕೆ.ಇ.ಬೋರ್ಡನ ಕಾರ್ಯಕಾರಿ ಮಂಡಳಿ ಅಧ್ಯಕ್ಷರಾದ ಸುನೀತ ಪುರೋಹಿತರು ಸಂಸ್ಥೆಯ ಸಾಧನೆ, ಕಾರ್ಯಚಟುವಟಿಕೆಗಳು ಹಾಗೂ ಮುಂದಿನ ಗುರಿಗಳ ಕುರಿತಾಗಿ ಮಾಹಿತಿಯನ್ನು ನೀಡಿದರು.

ಕಾರ್ಯಕ್ರಮದಲ್ಲಿ ಎಮ್.ಎ.ಆಳವಂಡಿ, ಪ್ರಕಾಶ ಕಡಮೆ, ಶ್ರೀಧರ ಉದಗಟ್ಟಿ, ವೈ.ಜಿ.ಭಗವತಿ, ಡಾ.ಲಿಂಗರಾಜ ರಾಮಾಪೂರ, ಶ್ರೀಧರ ಗಸ್ತಿ, ಸ್ಮಿತಾ ಕುಲಕರ್ಣಿ ಮುಂತಾದವರೊಂದಿಗೆ ಹೆಚ್ಚಿನ ಸಂಖ್ಯೆಯಲ್ಲಿ ಶಿಕ್ಷಕರು ಮತ್ತು ಸಾಹಿತ್ಯಾಸಕ್ತರು ನೆರೆದಿದ್ದರು.